2. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2002–03ನೇ ಸಾಲಿನ 7ನೇ ವಾರ್ಷಿಕ ವರದಿ.

3. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮಾನಸ ಗಂಗೋತ್ರಿ ಮೈಸೂರಿನ 2001–02ನೇ ಸಾಲಿನ ಲೆಕ್ಕ ತನಿಖಾ ವರದಿ ಮತ್ತು ವಾರ್ಷಿಕ ಲೆಕ್ಕಗಳು.

ಅಧ್ಯಕ್ಷರು :– ಎಲ್ಲಾ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

3. ವರದಿಯನ್ನೊಪ್ಪಿಸುವುದು

ಶ್ರೀ ಎ. ನಾಗರಾಜು (ಅಧ್ಯಕ್ಷರು, ಅಧೀನ ಶಾಸನ ರಚನಾ ಸಮಿತಿ) :– ಮಾನ್ಯ ಅಧ್ಯಕ್ಷರೆ, ನಾನು 2003–04ನೇ ಸಾಲಿನ ಅಧೀನ ಶಾಸನ ರಚನಾ ಸಮಿತಿಯ 30ನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು :– ವರದಿಯನ್ನೊಪ್ಪಿಸಲಾಯಿತು.

ಶ್ರೀ ಬಿ.ಬಿ. ಶಿವಪ್ಪ (ಅಧ್ಯಕ್ಷರು, ಸಾರ್ವಜನಿಕ ಉದ್ಯಮಗಳ ಸಮಿತಿ) :– ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಉದ್ಯಮಗಳ ಸಮಿತಿಯ, 103, 104, 105 ಹಾಗೂ 106ನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು :– ವರದಿಯನ್ನೊಪ್ಪಿಸಲಾಯಿತು.

4. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಣ್ಣ ನೀರಾವರಿ ಸಚಿವರು) :– ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಯವರ ಪರವಾಗಿ

(2003–04ನೇಯ ಸಾಲಿನ ಪೂರಕ ಅಂದಾಜುಗಳು (ಅಂತಿಮ ಕಂತು) ಸಭೆಯ ಮುಂದೆ ಮಂಡಿಸುತ್ತೇನೆ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ಈ ಕೆಳಗಿನ ಪ್ರಸ್ತಾವಗಳನ್ನು ಮಂಡಿಸುತ್ತಿದ್ದೇನೆ.

1. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕೃಷಿ ಮತ್ತು ತೋಟಗಾರಿಕೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜ್ಯಸ್ವ ಲೆಕ್ಕದಲ್ಲಿ 2899.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

2. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಪಶು ಸಂಗೋಪನೆ ಮತ್ತು ಮೀನುಗಾರಿಕೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 46.14 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

3. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಆರ್ಥಿಕ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 157392.17 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

4. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3460.82 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

5. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಒಳಾಡಳಿತ ಮತ್ತು ಸಾರಿಗೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1839.16 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 8.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

6. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 5250.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

7. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 393.25 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

8. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಹಕಾರ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 12218.25 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 300.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

9. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಮಾಜ ಕಲ್ಯಾಣ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 308.78 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 1504.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

10. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 30.01 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 10.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

11.2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 566.50 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

12. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಆಹಾರ ಮತ್ತು ನಾಗರೀಕ ಸರಬರಾಜು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3171.65 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

13. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕಂದಾಯ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1391.50 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

14. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಮಾಹಿತಿ ತಂತ್ರಜ್ಞಾನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 75.00 ಲಕ್ಷ ಹಾಗೂ ಬಂಡವಾಳ ಲೆಕ್ಕದಲ್ಲಿ 40.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

15. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ವಸತಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 300.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

16. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಶಿಕ್ಷಣ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1020.24 ಲಕ್ಷ ರೂ.ಗಳು ಹಾಗೂ ಬಂಡವಾಳ ಲೆಕ್ಕದಲ್ಲಿ 100.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

17. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ವಾಣಿಜ್ಯ ಮತ್ತು ಕೈಗಾರಿಕೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 181.96 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 3885.09 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

18. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ನಗರಾಭಿವೃದ್ಧಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 116.00 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 186.76 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲದನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

19. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಲೋಕೋಪಯೋಗಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 159.70 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 4033.55 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

20. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಜಲಸಂಪನ್ಮೂಲ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 963.10 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 16136.01 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

21. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1629.50 ಲಕ್ಷ ರೂ. ಹಾಗೂ ಬಂಡವಾಳ ಲೆಕ್ಕದಲ್ಲಿ 1585.00 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

22. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕಾರ್ಮಿಕ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 120.00 ಲಕ್ಷ ರೂಗಳಿಗೆ ಮೀರದ ಇನ್ನು ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

23. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಇಂಧನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 500.00 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

24. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕನ್ನಡ ಮತ್ತು ಸಂಸ್ಕೃತಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 442.79 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

25. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 91.65 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

26. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕಾನೂನು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ನೂಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 35.64 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

27. 2004ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 16.00 ಲಕ್ಷ ರೂಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

ಅಧ್ಯಕ್ಷರು :- 2003-04ನೇ ಸಾಲಿನ ಪೂರಕ ಅಂದಾಜುಗಳ (ಅಂತಿಮ ಕಂತು) ಸಭೆಯ ಮುಂದೆ ಮಂಡಿಸಲಾಯಿತು.

5. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಪ್ರಸ್ತಾವಿಸಲಾದ ವಿಷಯಗಳು

ವಿಷಯ : ಶ್ರೀ ಎಂ.ಎಸ್. ಆತ್ಮಾನಂದಾರವರು ವಿಧಾನಸಭೆಗೆ ಪ್ರವೇಶ ಮಾಡುವ ಪಶ್ಚಿಮ ಗೇಟ್‌ನಲ್ಲಿ ಗುರುತಿನ ಚೀಟಿ ತೋರಿಸಿದರೂ ಪೊಲೀಸರು ಸೌಜನ್ಯವಾಗಿ ನಡೆದುಕೊಳ್ಳದೆ ತಡೆದಿರುವ ಬಗ್ಗೆ.

† ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) :- ಮಾನ್ಯ ಅಧ್ಯಕ್ಷರೆ, ಇದು ಕೊನೆಯ ಅಧಿವೇಶನವೆಂದು ನಾವೆಲ್ಲರೂ ತಿಳಿದುಕೊಂಡಿದ್ದೇವೆ. ಇಲ್ಲಿ ಒಂದು ಘಟನೆಯು ನಡೆಯಿತು, ವಿಧಾನಸಭೆಯೊಳಗೆ ಬರುವಾಗ ಶ್ರೀ ಎಂ.ಎಸ್. ಆತ್ಮಾನಂದರವರು ನಮಗೆಲ್ಲರಿಗೂ ಗೊತ್ತಿರುವ ಹಾಗೆ ಹಿರಿಯ ಸದಸ್ಯರಾಗಿದ್ದಾರೆ, ಶ್ರೀಯುತರು 1978ರಲ್ಲಿ ಪ್ರಥಮ ಬಾರಿಗೆ ಶಾಸಕರಾಗಿ ಬಂದವರು, ಮಂತ್ರಿಗಳಾಗಿದ್ದಾರೆ, ಇದು ಅವರು 3ನೇ ಬಾರಿ ಆಯ್ಕೆಯಾಗಿ ಬಂದಿದ್ದಾರೆ. ಅವರು ವಿಧಾನಸಭೆಯೊಳಗೆ ಬರುವಾಗ ಇನ್ನು ವಿಧಾನಸಭೆ ವಿಸರ್ಜನೆಯಾಗಿಲ್ಲ ಸರ್ಕಾರ ಇನ್ನೂ ಇದೆ, ಆತ್ಮಾನಂದರವರು ಆಡಳಿತ ಪಕ್ಷದ ಹಿರಿಯ ಸದಸ್ಯರಾಗಿದ್ದು ಮಾಜಿ ಮಂತ್ರಿಗಳಾಗಿದ್ದವರು, ಅವರನ್ನು ತಡೆಹಿಡಿದು ಕತ್ತಿನ ಪಟ್ಟಿ ಹಿಡಿದು ನಮ್ಮ ಸೆಕ್ಯುರಿಟಿ ಅಧಿಕಾರಿಗಳು ಯಾರಿದ್ದಾರೆ, ಅವರು ನೀವು ಯಾರು? ಏಕೆ ಹೊರಟಿದ್ದೀರಿ ಎಂದು ಹೇಳಿ ಅವರನ್ನು ಪ್ರಶ್ನಿಸಿದರೆ ಇದನ್ನು ನೋಡಿದರೆ ಎಷ್ಟು ದುಃಖವಾಗುತ್ತದೆ. ಇಲ್ಲಿ ಸರ್ಕಾರವಿದೆಯೇ? ಇವರ ಮೇಲೆ ಸರ್ಕಾರದ ಹಿಡಿತವಿದೆಯೇ? ಈ ಸರ್ಕಾರ ಈಗ ಅಂತಿಮ ಹಂತಕ್ಕೆ ಬಂದಿದೆ ಬಹಳ ಸ್ವೇಚ್ಛಾಚಾರದಿಂದ ಪೊಲೀಸರು ನಡೆಯುತ್ತಿದ್ದಾರೆ ಇದಕ್ಕೆ ಕಡಿವಾಣವೇನಾದರೂ ಇದೆಯೇ? ಆಡಳಿತ ಪಕ್ಷದ ಸದಸ್ಯರಿಗೆ ಈ ರೀತಿ ನಡೆದುಕೊಂಡ ಮೇಲೆ ಇನ್ನು ಬೇರೆ ಹೊಸದಾಗಿ ಬಂದಿರತಕ್ಕಂತಹವರಿಗೆ, ಮತ್ತೆ ಬೇರೆ ವಿರೋಧಪಕ್ಷದವರು ಅವರುಗಳ ಗತಿ ಏನು? ಚುನಾವಣೆಯಾಗಿ ಹೊಸದಾಗಿ ಅಧಿವೇಶನ ಪ್ರಾರಂಭವಾಗುತ್ತಿಲ್ಲ. ಈಗಾಗಲೇ ನಾಲ್ಕೈದು ವರ್ಷ ಮುಗಿದು ಕೊನೆಯ ಹಂತದಲ್ಲಿದ್ದೇವೆ. ಶ್ರೀಯುತರವರು ಚಿರಪರಿಚಿತರಾಗಿದ್ದಾರೆ. ಅಧಿವೇಶನ ಇನ್ನು 2-3 ದಿವಸಗಳ ಕಾಲ ನಡೆಯಬಹುದು, ವಿಧಾನಸಭೆ ವಿಸರ್ಜನೆಯಾಗಬಹುದು ಎಂದು ತಿಳಿದುಕೊಂಡು, ಸರ್ಕಾರ ಇರುವುದಿಲ್ಲವೆಂದು ತಿಳಿದುಕೊಂಡು, ಶಾಸಕರ ಸದಸ್ಯತ್ವ ಇರುವುದಿಲ್ಲವೆಂದು ತಿಳಿದುಕೊಂಡು ಇವತ್ತು ಅವರ ಕತ್ತಿನ ಪಟ್ಟಿ ಹಿಡಿದುಕೊಂಡು ನಿಲ್ಲಿಸಿ ನೀವು ಎತಕ್ಕೆ ಹೋಗುತ್ತೀರಿ? ಎಂದು ತಡೆದರೆ ಇಲ್ಲಿ ಸರ್ಕಾರವಿದೆಯೇ ಏನು ಎಂದು ನನಗರ್ಥವಾಗುತ್ತಿಲ್ಲ. ಗೃಹ ಇಲಾಖೆಯವರು ಅವರ ಮೇಲೆ ಏನು ಕ್ರಮವನ್ನು ತೆಗೆದುಕೊಂಡಿದ್ದಾರೆ.

ಅಧ್ಯಕ್ಷರು :- ಮಾನ್ಯ ಸೋಮಶೇಖರ್‌ರವರೆ, ಈಗ ತಾಪು ಹೇಳಿದ್ದೀರಿ, ಆ ವಿಷಯ ನನ್ನ ಗಮನಕ್ಕೆ ಬಂತು. ಕಾರ್ಯದರ್ಶಿಯವರು ಈ ಬಗ್ಗೆ ಸೂಕ್ತಕ್ರಮವನ್ನು ತೆಗೆದುಕೊಳ್ಳುತ್ತಾರೆ.

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು) :- ಮಾನ್ಯ ಅಧ್ಯಕ್ಷರೆ, ಇದು ಬಹಳ ಗಂಭೀರವಾದಂತಹ ವಿಷಯ, ಶಾಸಕರುಗಳ ಪರಿಸ್ಥಿತಿಯೇ ಹೀಗಾದರೆ ನಾಳೆ ದಿವಸ ಜನಸಾಮಾನ್ಯರ ಪರಿಸ್ಥಿತಿ ಏನಾಗಬಹುದು? ಇದು ಬಹಳ ಗಂಭೀರವಾದುದು. ಶ್ರೀಯುತರವರು

(† ಈ ಚಿಹ್ನೆಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)